# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** | : | 1128 |
| **ಮಾನ್ಯ ಸದಸ್ಯರ ಹೆಸರು** | : | ಶ್ರೀ ಪಿ.ಹೆಚ್.ಪೂಜಾರ್<br>(ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) |
| **ಉತ್ತರಿಸುವ ದಿನಾಂಕ** | : | 12-03-2026 |
| **ಉತ್ತರಿಸುವ ಸಚಿವರು** | : | ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು |

| ಕ್ರಮ ಸಂಖ್ಯೆ | ಪ್ರಶ್ನೆ | ಉತ್ತರ |
|---|---|---|
| ಅ) | ವಿಶ್ವ ಪರಂಪರೆ ತಾಣ ಪಟ್ಟದಕಲ್ಲನ್ನು ವೀಕ್ಷಣೆ ಮಾಡಲು ಪ್ರವಾಸಿಗರು ಹೆಚ್ಚುತ್ತಿದ್ದು, ಸ್ಮಾರಕಗಳನ್ನು ವೀಕ್ಷಿಸಲು ಬರುತ್ತಿರುವ ಪ್ರವಾಸಿಗರ ವಾಹನ ನಿಲುಗಡೆ ಮಾಡಲು ಪಾರ್ಕಿಂಗ್ ವ್ಯವಸ್ಥೆ ಇಲ್ಲದೇ ಇರುವ ಕಾರಣಕ್ಕೆ ಪ್ರವಾಸಿಗರ ಸಂಖ್ಯೆ ಕಡಿಮೆಯಾಗಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡಿರುವ ಕ್ರಮಗಳೇನು; | ಪಟ್ಟದಕಲ್ಲು ಪ್ರವಾಸಿ ತಾಣದಲ್ಲಿ ಲಭ್ಯವಿರುವ ಸರ್ಕಾರಿ ಜಾಗಗಳನ್ನು ಬಳಸಿಕೊಂಡು ಪಾರ್ಕಿಂಗ್ ವ್ಯವಸ್ಥೆಯನ್ನು ಈಗಾಗಲೇ ಗ್ರಾಮ ಪಂಚಾಯಿತಿಯಿಂದ ಕಲ್ಪಿಸಲಾಗಿದೆ.<br><br>ಇದಲ್ಲದೇ, ಪಟ್ಟದಕಲ್ಲು ಪ್ರವಾಸಿ ತಾಣದ ಸ್ಮಾರಕಗಳ ಎದುರಿಗೆ ಸರ್ವೇ ನಂ. 3/1 ಅ1 ಹಾಗೂ 3/1 ಅ2 ರಲ್ಲಿ ಪ್ರವಾಸೋದ್ಯಮ ಇಲಾಖೆಯ ಹೆಸರಿನಲ್ಲಿರುವ 2.31 ಎಕರೆ ಜಮೀನನ್ನು ಇಲ್ಲಿಗೆ ಭೇಟಿ ನೀಡುವ ಪ್ರವಾಸಿಗರ ಅನುಕೂಲಕ್ಕಾಗಿ ಪಾರ್ಕಿಂಗ್ ಸೌಲಭ್ಯ ಅಭಿವೃದ್ಧಿ ಪಡಿಸಲು ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಪ್ರವಾಸೋದ್ಯಮ ಅಭಿವೃದ್ಧಿ ನಿಗಮ (ಕೆ.ಎಸ್.ಟಿ.ಡಿ.ಸಿ.), ಬೆಂಗಳೂರು ಇವರಿಗೆ ಹಸ್ತಾಂತರಿಸಲಾಗಿದ್ದು, ಕೆ.ಎಸ್.ಟಿ.ಡಿ.ಸಿ., ಪ್ರವಾಸೋದ್ಯಮ ಇಲಾಖೆ ಹಾಗೂ ಚಾಲುಕ್ಯ ಅಭಿವೃದ್ಧಿ ಪ್ರಾಧಿಕಾರಗಳ ಮಧ್ಯೆ ತ್ರಿಪಕ್ಷೀಯ ಒಪ್ಪಂದ ಮಾಡಿಕೊಳ್ಳುವ ಪ್ರಕ್ರಿಯೆ ಪ್ರಗತಿಯಲ್ಲಿದೆ. |
| ಆ) | ಪಟ್ಟದಕಲ್ಲಿನ ತಾಣದ ಪಕ್ಕದಲ್ಲಿ ಸರ್ಕಾರದ ಅಧೀನದ ನಿವೇಶನ ಲಭ್ಯವಿದ್ದರೂ ಪಾರ್ಕಿಂಗ್ ವ್ಯವಸ್ಥೆ ಮಾಡದೇ ಇರಲು ಕಾರಣಗಳೇನು; ಈ ಪಾರ್ಕಿಂಗ್ ವ್ಯವಸ್ಥೆ ಯಾವಾಗ ಕಲ್ಪಿಸಲಾಗುವುದು? | |

TOR 45 TDV 2026

(ಎಚ್.ಕೆ. ಪಾಟೀಲ)
ಕಾನೂನು, ನ್ಯಾಯ, ಮಾನವ ಹಕ್ಕುಗಳು,
ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ
ಹಾಗೂ ಪ್ರವಾಸೋದ್ಯಮ ಸಚಿವರು.